(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಖಂಡ ೨ ರಿಂದ ೭ ರವರೆಗೆ, ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಉಪಾಧ್ಯಕ್ಷರು.—ಪ್ರಸ್ತಾವ ಏನೆಂದರೆ " ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಡಾ॥ ಜಿ. ಪರಮೇಶ್ವರ್ (ರೇಷ್ಮೆ ರಾಜ್ಯ ಮಂತ್ರಿಗಳು) —೧೯೪೪ರ ಕರ್ನಾಟಕ ರೇಷ್ಮೆ ಹುಳು ತಳಿ, ರೇಷ್ಮೆ ಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು ಹಂಚಿಕೆ ಮತ್ತು ವ್ಯಾಪಾರದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು.—ಪ್ರಸ್ತಾವ ಏನೆಂದರೆ, " ೧೯೪೪ರ ಕರ್ನಾಟಕ ರೇಷ್ಮೆ ಹುಳುತಳಿ, ರೇಷ್ಮೆ ಗೂಡು ಮತ್ತು ರೇಷ್ಮೆ ನೂಲು (ಉತ್ಪಾದನೆ, ಸರಬರಾಜು, ಹಂಚಿಕೆ ಮತ್ತು ವ್ಯಾಪಾರದ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು,,.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೨) ೧೯೪೪ರ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎನ್.ಜಿ. ಹಾಲಪ್ಪ (ಪರಿಸರ, ವಿಜ್ಞಾನ, ತಂತ್ರಜ್ಞಾನ ಮತ್ತು ಮಲೆನಾಡು ಅಭಿವೃದ್ಧಿ ರಾಜ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೪೪ರ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎನ್. ಜಿ. ಹಾಲಪ್ಪ. ಈ ವಿಧೇಯಕಕ್ಕೆ ಒಪ್ಪಿಗೆ ನೀಡಬೇಕೆಂದು ಕೇಳಿಕೊಳ್ಳುತ್ತೇನೆ.

ಉಪಾಧ್ಯಕ್ಷರು.—ಪ್ರಸ್ತಾವ ಏನೆಂದರೆ, ೧೯೪೪ರ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ತಿದ್ದುಪಡಿ ಪ್ರಸ್ತಾವ

ಖಂಡ ೨ಕ್ಕೆ :

ಶ್ರೀ ಎನ್.ಜಿ. ಹಾಲಪ್ಪ (ಪರಿಸರ ವಿಜ್ಞಾನ, ತಂತ್ರಜ್ಞಾನ ಮತ್ತು ಮಲೆನಾಡು ಅಭಿವೃದ್ಧಿ ಸಚಿವರು).—ಮಾನ್ಯ ಉಪಾಧ್ಯಕ್ಷರೇ, ಈ ವಿಧೇಯಕದ ಎರಡನೇ ಖಂಡದ ನಿಯಮ ೯೧ (೩೬)ನೇ ಅನುಸೂಚಿಯ ಮೂರನೇ ಅಂಕಣದ ಎರಡನೇ ಕ್ರಮ ಸಂಖ್ಯೆ ನಂತರಕ್ಕೆ ಈ ಕೆಳಕಂಡ ತಿದ್ದುಪಡಿಯನ್ನು ಸೂಚಿಸುತ್ತಿದ್ದೇನೆ. "ಚಿಕ್ಕಮಗಳೂರು ಜಿಲ್ಲೆ ತರೀಕೆರೆ ಎಂಬ ಪದದ ತರುವಾಯ "ಕಡೂರು" ಎಂಬುದನ್ನು, ಮತ್ತು ಆನೇ ಕ್ರಮಸಂಖ್ಯೆಯಲ್ಲಿ ಶಿವಮೊಗ್ಗೆಯ ಭದ್ರಾವತಿ ಎಂಬ ಪದದ ತರುವಾಯ 'ಹೊಳಲೂರು' ಎಂಬುದನ್ನು ಸೇರಿಸುವುದು".

ತಿದ್ದುಪಡಿ ಪ್ರಸ್ತಾವನ್ನು ಮಂಡಿಸಲಾಯಿತು.

ಉಪಾಧ್ಯಕ್ಷರು.—ಪ್ರಸ್ತಾವ ಏನೆಂದರೆ, ಈ ವಿಧೇಯಕದ ಎರಡನೇ ಖಂಡದ ನಿಯಮ ೯೧ (೩೬)ನೇ ಅನುಸೂಚಿಯ ಮೂರನೇ ಅಂಕಣದ ಎರಡನೇ ಕ್ರಮಸಂಖ್ಯೆಯಲ್ಲಿ ಚಿಕ್ಕಮಗಳೂರು ಜಿಲ್ಲೆ ತರೀಕೆರೆ ಎಂಬ ಪದದ ತರುವಾಯ "ಕಡೂರು" ಎಂದು ಮತ್ತು ಅನೇ ಕ್ರಮ ಸಂಖ್ಯೆಯಲ್ಲಿ ಶಿವಮೊಗ್ಗೆಯ ಭದ್ರಾವತಿ ಎಂಬ ಪದದ ತರುವಾಯ "ಹೊನ್ನಾಳಿ" ಎಂದು ಸೇರಿಸಿ ತಿದ್ದುಪಡಿ ಮಾಡಲು ಅನುಮತಿ ನೀಡುವುದು.

ತಿದ್ದುಪಡಿ ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ ತಿದ್ದುಪಡಿಯಾದ ರೀತಿಯಲ್ಲಿ :

ಉಪಾಧ್ಯಕ್ಷರು.—ಖಂಡ ಎರಡು ತಿದ್ದುಪಡಿಯಾದ ರೀತಿಯಲ್ಲಿ ವಿಧೇಯಕದ ಅಂಗವಾಗಿರುತ್ತದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ಎರಡು ತಿದ್ದುಪಡಿಯಾದ ರೀತಿಯಲ್ಲಿ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ :

ಉಪಾಧ್ಯಕ್ಷರು —ಪ್ರಸ್ತಾವ ಏನೆಂದರೆ " ಮೊದಲನೆ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾಪವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ. ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎನ್.ಜಿ. ಹಾಲಪ್ಪ (ಪರಿಸರ ವಿಜ್ಞಾನ ತಂತ್ರಜ್ಞಾನ, ಮತ್ತು ಮಲೆನಾಡು ಅಭಿವೃದ್ಧಿ ರಾಜ್ಯ ಸಚಿವರು) —೧೯೪೪ರ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ(ತಿದ್ದುಪಡಿ) ವಿಧೇಯಕವನು ತಿದ್ದುಪಡಿಯಾದ ರೀತಿಯಲ್ಲಿ ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು.—ಪ್ರಸ್ತಾವ ಏನೆಂದರೆ, " ೧೯೪೪ರ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿಯಾದ ರೀತಿಯಲ್ಲಿ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೧೯೪೪ರ ಕರ್ನಾಟಕ ವಿಶೇಷ ನ್ಯಾಯಾಧೀಕರಣ ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಮತ್ತು ಕಂದಾಯ ಮಂತ್ರಿಗಳು).—ಮಾನ್ಯ ಉಪ ಸಭಾಧ್ಯಕ್ಷರೆ,

೧೯೪೪ರ ಕರ್ನಾಟಕ ವಿಶೇಷ ನ್ಯಾಯಾಧಿಕರಣ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಉಪಾಧ್ಯಕ್ಷರು.—ಪ್ರಸ್ತಾವ ಏನೆಂದರೆ : "೧೯೪೪ರ ಸಾಲಿನ ಕರ್ನಾಟಕ ವಿಶೇಷ ನ್ಯಾಯಾಧಿಕರಣ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.